**ಓ ಎಸ್ 73/2022 ಡಿಡಬ್ಲ್ಯೂ 1**

**ಸಾಕ್ಷಿಯನ್ನು ದಿಃ 12.01.2026 ರಂದು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಂದುವರಿದ ಮುಖ್ಯ ವಿಚಾರಣೆಃ 3 ಮತ್ತು 4 ನೇ ಪ್ರತಿವಾದಿಗಳ ಪರ ಶ್ರೀ ಹೆಚ್ ಎಸ್ ಎಸ್ ವಕೀಲರಿಂದಃ**

ವಾಹನ ಚಾಲನಾ ಪರವಾನಗಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಶಾನೆ ಡಿ 12 ಎಂದು ಗುರುತಿಸಲಾಯಿತು.

**ಮುಂದುವರಿದ ಪಾಟೀ ಸವಾಲುಃ ವಾದಿ ಪರ ಶ್ರೀ ಎಂ ಎಸ್ ಪಿ ವಕೀಲರಿಂದಃ**

ಸರ್ವೆ ನಂ. 449 ನಮ್ಮ ಪಿತ್ರಾರ್ಜಿತ ಆಸ್ತಿ ಎಂದರೆ ಸರಿಯಲ್ಲ, ಸ್ವಯಾರ್ಜಿತ ಆಸ್ತಿ. ಸದರಿ ಆಸ್ತಿಯು ಸರ್ಕಾರಿ ಆಸ್ತಿಯಾಗಿದ್ದು ಅದು ನಮ್ಮ ತಂದೆಯ ಹೆಸರಿಗೆ ಮಂಜೂರಾಗಿದೆ. ಆ ಆಸ್ತಿಯು ನಮ್ಮ ಪಿತ್ರಾರ್ಜಿತ ಹಾಗೂ ಒಟ್ಟು ಕುಟುಂಬದ ಆಸ್ತಿ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ಉಳಿದ ದಾಖಲೆಗಳು ನಮ್ಮ ವೈಯಕ್ತಿಕ ವಿವರಗಳಿಗೆ ಸಂಬಂಧಿಸಿದ ದಾಖಲೆಗಳಾಗಿವೇ ಹೊರತು ನಮ್ಮ ಆದಾಯದ ಮೂಲಕ್ಕೆ ಸಂಬಂಧಿಸಿದ ದಾಖಲೆಗಳಲ್ಲ ಎಂದರೆ ಸರಿಯಲ್ಲ. ವಾದಿಯು ದಾವೆಯಲ್ಲಿ ಕೋರಿರುವ ಪರಿಹಾರವನ್ನು ಪಡೆಯಲು ತೊಂದರೆ ಮಾಡುವ ಸಲುವಾಗಿ ನಾನು ದಾವೆಗೆ ಸಂಬಂಧಪಡದ ಈ ದಾಖಲೆಗಳನ್ನು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ)**

**ಸಾ ಓ ಹೇ ಸ ಒ**

**(ಬಾಬು ಎನ್)**
**1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಪಾಂಡವಪುರ**